Fax: 08282-256262
E-mail: kuvempuacademic@gmail.com
Phone No - 08282-256149
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ, ಜ್ಞಾನಸಹ್ಯಾದ್ರಿ,
ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

## ಅಧಿಸೂಚನೆ

ವಿಷಯ: ಸ್ನಾತಕ ಮತ್ತು ಸ್ನಾತಕೋತ್ತರ ಪದವಿಯ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಕುರಿತು.
ಉಲ್ಲೇಖ: 1 ದಿನಾಂಕ:02-02-2019ರ ಸಿಂಡಿಕೇಟ್ ಸಭೆಯ ನಿರ್ಣಯ.
2 ಅಧಿಸೂಜನೆ ಸಂಖ್ಯೆ:ಕುವಿ:ಶೈವಿ:ಎಸಿ-8:7608:2018-19, ದಿನಾಂಕ:13-03-2019.

*****

**ಪ್ರಸ್ತಾವನೆ:**

ಕುವೆಂಪು ವಿಶ್ವವಿದ್ಯಾಲಯದ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಯ ವಿದ್ಯಾರ್ಥಿಗಳಿಗೆ 2019-20ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ, ಈ ಕೆಳಗೆ ತಿಳಿಸಿರುವ ವಿದ್ಯಾರ್ಥಿಗಳಿಗೆ ಪ್ರವೇಶ ಶುಲ್ಕದಲ್ಲಿ ಪೂರ್ಣ ವಿನಾಯಿತಿ ನೀಡುವ ಬಗ್ಗೆ ದಿನಾಂಕ:02-02-2019ರ ಸಿಂಡಿಕೇಟ್ ಸಭೆಯಲ್ಲಿ ನಿರ್ಣಯಿಸಿರುತ್ತದೆ. ಹಾಗೂ ಈ ಸಂಬಂಧ ಉಲ್ಲೇಖ(2)ರ ಅಧಿಸೂಚನೆಯಲ್ಲಿ ಈ ಕುರಿತು ಮಾರ್ಗಸೂಚಿಯನ್ನು ರಚಿಸಲು ಕುಲಸಚಿವ (ಪ)ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು ಸದರಿ ಸಮಿತಿಯು ಈ ಬಗ್ಗೆ ಪರಿಶೀಲಿಸಿ ಮಾರ್ಗಸೂಚಿಗಳನ್ನು ನೀಡಿರುತ್ತದೆ.

1. ಆತ್ಮಹತ್ಯೆ ಮಾಡಿಕೊಂಡ ಕೃಷಿಕರ ಮಕ್ಕಳು.
2. ಭಾರತೀಯ ಸೇನೆ/ ಅರೆಸೇನಾ ಪಡೆಯಲ್ಲಿದ್ದು, ಕರ್ತವ್ಯದ ಅವಧಿಯಲ್ಲಿ ಮಡಿದ ಯೋಧರ ಮಕ್ಕಳು.
3. ತೃತೀಯ ಲಿಂಗಿಗಳು.
4. ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ
5. ರಾಷ್ಟ್ರೀಯ / ಅಂತರಾಷ್ಟ್ರೀಯ ಕ್ರೀಡೆಗಳಲ್ಲಿ ಕುವೆಂಪು ವಿಶ್ವವಿದ್ಯಾಲಯದಿಂದ ಪ್ರತಿನಿಧಿಸಿ ಪದಕ ಪಡೆದ ಪ್ರತಿಭಾವಂತ ಕ್ರೀಡಾಪಟುಗಳು ಮತ್ತು ರಾಷ್ಟ್ರೀಯ / ಅಂತರಾಷ್ಟ್ರೀಯ ಮಟ್ಟದ ಪಠ್ಯೇತರ ಚಟುವಟಿಕೆಯ ಸ್ಪರ್ಧೆಗಳಲ್ಲಿವಿಶ್ವವಿದ್ಯಾಲಯದ ಪ್ರತಿನಿಧಿಯಾಗಿ ಸ್ಪರ್ಧಿಸಿ ಬಹುಮಾನ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ.
6. ಪಿ.ಯು.ಸಿ./+2 ಹಂತದಲ್ಲಿ ಪ್ರಥಮ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಸ್ನಾತಕ ಕೋರ್ಸ್‌ಗಳಿಗೆ ಮತ್ತು ಸ್ನಾತಕ ಪದವಿಯಲ್ಲಿ ಪ್ರಥಮ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ಪ್ರವೇಶಾತಿ ಬಗ್ಗೆ.

ಈ ಹಿನ್ನೆಲೆಯಲ್ಲಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**ಸಂಖ್ಯೆ:ಕುವಿ:ಶೈವಿ:ಎಸಿ-8: 1385 :2019-20, ದಿನಾಂಕ:11-06-2019**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸಿಂಡಿಕೇಟ್ ಸಭೆಯ ನಿರ್ಣಯ ಹಾಗೂ ಸಮಿತಿ ನೀಡಿರುವ ಮಾರ್ಗಸೂಚಿಗಳನ್ವಯ ಮೇಲ್ಕಂಡ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು 2019-20ನೇ ಶೈಕ್ಷಣಿಕ ಸಾಲಿನಿಂದಶುಲ್ಕದಲ್ಲಿ ಪೂರ್ಣ ವಿನಾಯಿತಿ ನೀಡಲು ಆದೇಶಿಸಲಾಗಿದೆ

**ಷರತ್ತುಗಳು:**

1. ಆತ್ಮಹತ್ಯೆ ಮಾಡಿಕೊಂಡ ಕೃಷಿಕರ ಮಕ್ಕಳು ಸಂಬಂಧಪಟ್ಟ ಇಲಾಖೆಗಳಿಂದ ಪಡೆದ ಆತ್ಮಹತ್ಯೆಯ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.
2. ಭಾರತೀಯ ಸೇನೆ/ ಅರೆಸೇನಾ ಪಡೆಯಲ್ಲಿದ್ದು, ಕರ್ತವ್ಯದ ಅವಧಿಯಲ್ಲಿ ಮಡಿದ ಯೋಧರ ಬಗ್ಗೆ ಸಂಬಂಧಪಟ್ಟ ಇಲಾಖೆಗಳಿಂದ ಪಡೆದ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.
3. ತೃತೀಯ ಲಿಂಗಿಗಳು ಈ ಬಗ್ಗೆ ಸಂಬಂಧಪಟ್ಟ ಜಿಲ್ಲಾ ವೈದ್ಯಾಧಿಕಾರಿಗಳಿಂದ ದೃಢೀಕರಿಸಿ, ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
4. ಸಫಾಯಿ ಕರ್ಮಚಾರಿಗಳ ಮಕ್ಕಳು ಸಂಬಂಧಪಟ್ಟ ಇಲಾಖೆಗಳಿಂದ ಪ್ರಮಾಣ ಪತ್ರವನ್ನು ದೃಢೀಕರಿಸಿ ಸಲ್ಲಿಸತಕ್ಕದ್ದು.
5. ರಾಷ್ಟ್ರೀಯ / ಅಂತರಾಷ್ಟ್ರೀಯ ಕ್ರೀಡೆ ಮತ್ತು ಅಂತರಾಷ್ಟ್ರೀಯ ಮಟ್ಟದ ಪಠ್ಯೇತರ ಚಟುವಟಿಕೆಯಲ್ಲಿ ಕುವೆಂಪು ವಿಶ್ವವಿದ್ಯಾಲಯವನ್ನು ಪ್ರತಿನಿದಿಸಿದ ವಿದ್ಯಾರ್ಥಿಗಳು ಬಹುಮಾನ ಪಡೆದ ಬಗ್ಗೆ ವಿಭಾಗಗಳಿಂದ ದೃಢೀಕರಿಸಿ ಸಲ್ಲಿಸತಕ್ಕದ್ದು.
6. ಪಿ.ಯು.ಸಿ./+2 ಹಂತದಲ್ಲಿ ಶೇ90.5ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ದ್ವಿತೀಯ ಹಾಗೂ ತೃತೀಯ ವರ್ಷದ ಪ್ರವೇಶ ಶುಲ್ಕವನ್ನು ವಿನಾಯಿತಿ ಮಾಡಲಾಗುವುದು. (ಪ್ರವೇಶಾತಿಗೆ ಮುಂಚಿತವಾಗಿ ರ್‍ಯಾಂಕ್ ಪಟ್ಟಿ ಪ್ರಕಟಿಸಿ ದಾಖಲಾತಿ ಸಲ್ಲಿಸಿದಲ್ಲಿ ಪ್ರಥಮ ವರ್ಷದ ಪ್ರವೇಶಾತಿ ಶುಲ್ಕ ವಿನಾಯಿತಿ ನೀಡಲಾಗುವುದು)

ಮಾನ್ಯ ಕುಲಸಚಿವರ ಅನುಮೋದನೆಯಾಗಿದೆ

(ಡಾ. ಧರಣಿ ಕುಮಾರ್ ಪಿ.)
ಉಪ ಕುಲಸಚಿವ
ಶೈಕ್ಷಣಿಕ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577451
ಶಿವಮೊಗ್ಗ ಜಿಲ್ಲೆ.

--2

ಗೆ :

1. ಕುವೆಂಪು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ /ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಸ್ನಾತಕ ಪದವಿಗಳ ಸಂಯೋಜಿತ :ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಕುವೆಂಪು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಬಿ.ಇಡಿ. ಕಾಲೇಜುಗಳ ಪ್ರಾಂಶುಪಾಲರುಗಳಿಗೆ
4. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕಡೂರು / ಚಿಕ್ಕಮಗಳೂರು
5. ನಿರ್ದೇಶಕರು ಯು.ಸಿ.ಸಿ.ಎಫ್.ಕೇಂದ್ರ ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.

ಪ್ರತಿಗಳು :

1. ಎಲ್ಲಾ ನಿಕಾಯಗಳ ಡೀನರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ/ಶಿವಮೊಗ್ಗ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಸಹ್ಯಾದ್ರಿ ಕಾಲೇಜು ಆವರಣ, ಶಿವಮೊಗ್ಗ.
3. ಕುಲಸಚಿವ(ಪ), ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
4. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
5. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
6. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
7. ನಿರ್ದೇಶಕರು, ಪಿ.ಎಂ.ಇ. ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
8. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
9. ನಿರ್ದೇಶಕರು, ಐ.ಕ್ಯೂ.ಎ.ಸಿ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ